ಅನುಮೋದನೆಯಾದ ಯೋಜನೆಗಳಿಗೆ ಬೇಕಾದ ಭೂಮಿ, ವಿದ್ಯುತ್, ನೀರು ಮತ್ತಿತರೆ ಮೂಲಸೌಕರ್ಯಗಳನ್ನು ನೀಡಲು ವಿವಿಧ ಇಲಾಖೆ / ಸಂಸ್ಥೆಗಳಿಗೆ ಶಿಫಾರಸ್ಸು ಮಾಡಲಾಗುವುದು.

ಇ) ಕೆ.ಐ.ಎ.ಡಿ.ಬಿ.ಯ ಕೈಗಾರಿಕೆಗಳಿಗಾಗಿ ಬೀದರ್ ತಾಲ್ಲೂಕಿನ ಅಣದೂರು, ಅಣದೂರು(ಡಿ), ಕಪಿಲಾಪುರ(ಎ) ಮತ್ತು ಕೋಳಾರ ಗ್ರಾಮಗಳಲ್ಲಿ ಒಟ್ಟು 2100 ಎಕರೆ ಜಮೀನನ್ನು ಗುರುತಿಸಿದ್ದು, ಇವುಗಳನ್ನು ಇನ್ನೂ ಸ್ವಾಧೀನಪಡಿಸಿಕೊಂಡಿರುವುದಿಲ್ಲ. ಹಾಗಾಗಿ ಪರಿಹಾರ ಧನದ ವಿವರ ಒದಗಿಸುವುದು ಉದ್ಭವಿಸುವುದಿಲ್ಲ.

ಈ) ಕೆ.ಐ.ಎ.ಡಿ.ಬಿ. ಮುಖಾಂತರ ಭೂಮಿಯನ್ನು ಸ್ವಾಧೀನಪಡಿಸಿಕೊಂಡಾಗ ಭೂಮಿ ಕಳೆದುಕೊಂಡ ಪ್ರತಿ ಕುಟುಂಬದ ಒಬ್ಬ ಸದಸ್ಯರಿಗೆ ಅವರ ವಿದ್ಯಾರ್ಹತೆ ಹಾಗೂ ಕೈಗಾರಿಕಾ ಘಟಕಗಳ ಉಪಯುಕ್ತತೆಗೆ ಅನುಗುಣವಾಗಿ ನೇಮಕ ಮಾಡಿಕೊಳ್ಳಲು ಕೈಗಾರಿಕೆಗಳಿಗೆ ಅವುಗಳ ಅನುಮೋದನಾ ಆದೇಶದಲ್ಲಿ ಷರತ್ತನ್ನು ಹಾಕಲಾಗಿದೆ.

ಮಿನಿ ವಿಧಾನಸೌಧ ಸ್ಥಾಪನೆ

349 (660) ಶ್ರೀ ರಹೀಂ ಖಾನ (ಬೀದರ್): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ಇಲ್ಲದೇ ಎಲ್ಲಾ ಕಛೇರಿಯ ಕೆಲಸ ಕಾರ್ಯಗಳಿಗೆ ಹಾಗೂ ಜನತೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು ಇಲಾಖಾ ವತಿಯಿಂದ ಎಷ್ಟು ಹಣವನ್ನು ವಿನಿಯೋಗಿಸಲಾಗುವುದು;

ಇ) ಈ ಮಿನಿ ವಿಧಾನಸೌಧ ಕಾಮಗಾರಿಯನ್ನು ಕೈಗೆತ್ತಿಕೊಂಡು ಪೂರ್ತಿಗೊಳಿಸಿ ತಾಲ್ಲೂಕಿನಲ್ಲಿ ಬರುವ ಎಲ್ಲಾ ಇಲಾಖೆಗಳು ಒಂದೇ ಕಡೆ ಇರುವಂತೆ ಮಾಡಿ ಜನತೆಗೆ ಎಂದಿನಿಂದ ಅನುಕೂಲ ಮಾಡಿಕೊಡಲಾಗುವುದು?

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು):

ಅ) ಹೌದು.

ಆ) ಅಂದಾಜು ರೂ. 250.00 ಲಕ್ಷಗಳು.

ಇ) ಕಾಮಗಾರಿಯನ್ನು ಪ್ರಾರಂಭಿಸಲು ತಾತ್ವಿಕವಾಗಿ ನಿರ್ಧರಿಸಲಾಗಿದೆ. ಅಂದಾಜು ಪಟ್ಟಿ ಮತ್ತು ನಕ್ಷೆಯನ್ನು ಪಡೆದು ನಂತರ ಆಡಳಿತಾತ್ಮಕ ಅನುಮೋದನೆ ನೀಡಲು ಕ್ರಮವಹಿಸಲಾಗುತ್ತಿದೆ.